ಕರ್ನಾಟಕ ಸರ್ಕಾರ

ಅ.ಸ.ಪ. ಸಂಖ್ಯೆ : ಗ್ರಾಅಪ/04/ಎಯುಡಿ/2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:19.01.2013

## ಸುತ್ತೋಲೆ

**ವಿಷಯ : ದೃಢೀಕೃತ ವಾರ್ಷಿಕ ಲೆಕ್ಕಪತ್ರಗಳನ್ನು ಸರ್ಕಾರಿ ಮುದ್ರಣಾಲಯದಿಂದ ಮುದ್ರಿಸಿ ಸಲ್ಲಿಸುವ ಬಗ್ಗೆ**

******

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 262(3) ರಂತೆ ಮಹಾಲೇಖಪಾಲರಿಂದ ಲೆಕ್ಕಪರಿಶೋಧನೆಯಾಗಿ ದೃಢೀಕೃತಗೊಂಡ ಜಿಲ್ಲಾ ಪಂಚಾಯತ್ ವಾರ್ಷಿಕ ಲೆಕ್ಕಪತ್ರಗಳನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸಬೇಕಾಗಿರುತ್ತದೆ. ಈ ವಾರ್ಷಿಕ ಲೆಕ್ಕಪತ್ರಗಳನ್ನು ಕೆಲವು ಜಿಲ್ಲಾ ಪಂಚಾಯತ್‌ಗಳಲ್ಲಿ ಖಾಸಗಿ ಮುದ್ರಣಾಲಯಗಳಲ್ಲಿ ಮುದ್ರಿಸಿ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅಲ್ಲದೇ ಇದೇ ವಿಷಯಕ್ಕೆ ಸಂಬಂಧಿಸಿದಂತೆ ವಿಧಾನಮಂಡಲದ ಕಾಗದಪತ್ರಗಳ ಸಮಿತಿ ಸಭೆಯಲ್ಲಿ ಆಕ್ಷೇಪಣೆ ವ್ಯಕ್ತಪಡಿಸಲಾಗಿದೆ. ಆದ್ದರಿಂದ ಜಿಲ್ಲಾ ಪಂಚಾಯತ್ ದೃಢೀಕೃತ ವಾರ್ಷಿಕ ಲೆಕ್ಕಪತ್ರಗಳನ್ನು ಇನ್ನು ಮುಂದೆ ಕಡ್ಡಾಯವಾಗಿ ಸರ್ಕಾರಿ ಮುದ್ರಣಾಲಯದಲ್ಲಿ ಮುದ್ರಿಸಲು ಸೂಚಿಸಿದೆ. ಇದಕ್ಕೆ ವ್ಯತಿರಿಕ್ತವಾಗಿ ಖಾಸಗಿ ಮುದ್ರಣಾಲಯದಲ್ಲಿ ಮುದ್ರಿಸಿರುವುದು ಗಮನಕ್ಕೆ ಬಂದಿರುವುದು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

(ವಿ. ರಶ್ಮಿ)
ಸರ್ಕಾರದ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು :-

1. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಲೆಕ್ಕಾಧಿಕಾರಿಗಳು